ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE:

# ಹೊರಟ್ಟಿ ಸಭಾಪತಿ: ಇಂದು ಫೈನಲ್?



ಬೆಂಗಳೂರು: ವಿಧಾನಪರಿಷತ್ತಿನ ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಟ್ಟು, ತಾನು ಉಪ ಸಭಾಪತಿ ಹುದ್ದೆ ಪಡೆಯಲು ಬಿಜೆಪಿ ತಾತ್ವಿಕವಾಗಿ ಒಪ್ಪಿಕೊಂಡಿದೆ. ಬಹುತೇಕ ಜೆಡಿಎಸ್‌ನ ಹಿರಿಯ ಮುಖಂಡ ಬಸವರಾಜ ಹೊರಟ್ಟಿ ಸಭಾಪತಿಯಾಗುವ ಸಾಧ್ಯತೆಯಿದೆ. ಬುಧವಾರ ಹೊರಟ್ಟಿ ಅವರು ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಿದ್ದಾರೆ. ವಿವರ ೩ 8

# ಸಭಾಪತಿ ಪಟ್ಟಕ್ಕೆ ಜೆಡಿಎಸ್, ಬಿಜೆಪಿ ದೋಸ್ತಿ

## ಜೆಡಿಎಸ್‌ಗೆ ಹುದ್ದೆ ಬಿಟ್ಟುಕೊಡಲು ಬಿಜೆಪಿಯಿಂದ ತಾತ್ವಿಕ ಒಪ್ಪಿಗೆ | ಇಂದು ಸ್ಪಷ್ಟ ಚಿತ್ರಣ ಸಂಭವ
## ಬಿಜೆಪಿ ನಾಯಕರ ಜತೆ ದೇವೇಗೌಡ ದೂರವಾಣಿ ಮಾತುಕತೆ | ಹೊರಟ್ಟಿಗೆ ಸಭಾಪತಿ ಸ್ಥಾನ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್ತಿನ ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಬಿಜೆಪಿ ತಾತ್ವಿಕವಾಗಿ ಒಪ್ಪಿಕೊಂಡಿದ್ದು, ಈ ಬಗ್ಗೆ ಬುಧವಾರ ಸ್ಪಷ್ಟ ಚಿತ್ರಣ ಹೊರಬೀಳಲಿದೆ.

ಈಗಾಗಲೇ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಅವರು ಈ ಸಂಬಂಧ ಬಿಜೆಪಿ ನಾಯಕರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದು, ಬುಧವಾರ ಪರಿಷತ್ತಿನ ಜೆಡಿಎಸ್ ನಾಯಕ ಬಸವರಾಜ ಹೊರಟ್ಟಿ ಅವರು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸುವ ನಿರೀಕ್ಷೆಯಿದೆ.

ಇದೇ ವೇಳೆ ಗುರುವಾರದಿಂದ ಜಂಟಿ ಅಧಿವೇಶನ ಪ್ರಾರಂಭವಾಗಲಿದ್ದು, ಶುಕ್ರವಾರ ಉಪಸಭಾಪತಿ ಸ್ಥಾನಕ್ಕೆ ಚುನಾವಣೆ ನಡೆಸಲಾಗುತದೆ. ಉಪಸಭಾಪತಿ ಸ್ಥಾನಕ್ಕೆ ಚುನಾವಣೆ ನಡೆದ ಬಳಿಕ ಸಭಾಪತಿ ಹುದ್ದೆಗೆ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಹೀಗಾಗಿ, ಬುಧವಾರ ಬಿಜೆಪಿ ಮತ್ತು ಜೆಡಿಎಸ್‌ನಲ್ಲಿ ಹೊಂದಾಣಿಕೆ ರೂಪುರೇಷೆ ಅಂತಿಮಗೊಳಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ. ವಿಧಾನಪರಿಷತ್‌ನ ಸಭಾಪತಿ ಸ್ಥಾನಕ್ಕೆ ಪ್ರತಾಪ್ ಚಂದ್ರಶೆಟ್ಟಿ ರಾಜೀನಾಮೆ ನೀಡಲು ಮುಂದಾಗಿರುವ ಹಿನ್ನೆಲೆಯಲ್ಲಿ ಜೆಡಿಎಸ್ ಹಿರಿಯ ನಾಯಕ ಬಸವರಾಜ ಹೊರಟ್ಟಿ ಅವರಿಗೆ ಆ ಹುದ್ದೆ ನೀಡಲು ಪಕ್ಷದ ವರಿಷ್ಠರು ತೀರ್ಮಾನಿಸಿದ್ದಾರೆ.



> ಸಭಾಪತಿ ಸ್ಥಾನ ನೀಡುವ ಬಗ್ಗೆ ಚರ್ಚಿಸಿ ನಿರ್ಧರಿಸಲಾಗಿದೆ. ಸಭಾಪತಿ ಮಾಡಲು ಜೆಡಿಎಸ್ ಸದಸ್ಯರೆಲ್ಲ ಸರ್ವಾನುಮತದಿಂದ ಒಪ್ಪಿಗೆ ನೀಡಿದ್ದಾರೆ.
>
> • ಬಸವರಾಜ ಹೊರಟ್ಟಿ

ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಮುಂದಾಗಿರುವ ಬಿಜೆಪಿಯು ಉಪಸಭಾಪತಿ ಸ್ಥಾನಕ್ಕೆ ತೃಪ್ತಿಪಟ್ಟುಕೊಳ್ಳಲಿದೆ. ಉಪಸಭಾಪತಿ ಸ್ಥಾನಕ್ಕೆ ಬಿಜೆಪಿಯಿಂದ ಯಾರನ್ನು ಆಯ್ಕೆ ಮಾಡಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಲು ಮುಖ್ಯಮಂತ್ರಿ ಯಡಿಯೂರಪ್ಪ ಅವರು ಬುಧವಾರ ಸಂಜೆ ತಮ್ಮ ನಿವಾಸದಲ್ಲಿ ಪರಿಷತ್ತಿನ ಬಿಜೆಪಿ ಸದಸ್ಯರ ಸಭೆ ಕರೆದಿದ್ದಾರೆ. ಆಯನೂರು ಮಂಜುನಾಥ್, ಸುನಿಲ್ ನಮೋಶಿ, ಅರುಣ್ ಶಹಾಪುರ, ಮಹಾಂತೇಶ್ ಕವಟಗಿಮಠ ರೇಸಲ್ಲಿದ್ದಾರೆ.